# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಶುಕ್ರವಾರ, ದಿನಾಂಕ:23ನೇ ಫೆಬ್ರವರಿ, 2024

## (ಸಮಯ: ಬೆಳಗ್ಗೆ: 09.00 ಗಂಟೆಗೆ)

* * *

## 01. ಪ್ರಶ್ನೋತ್ತರ

| | | |
|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : ಏಳು ಮತ್ತು ಎಂಟನೇ ಪಟ್ಟಿ |
| ಆ) | **ತಡೆಹಿಡಿಯಲಾದ ಪ್ರಶ್ನೆ:** | |
| | 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎನ್. ರವಿಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 34(257) | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು |
| | 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ರಘುನಾಥ್ ರಾವ್ ಮಲ್ಕಾಪುರೆ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 66(611) | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |
| | 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 75(625) | ಮಾನ್ಯ ಕೃಷಿ ಸಚಿವರು |
| | 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶಾಂತರಾಮ್ ಬುಡ್ನ ಸಿದ್ದಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 82(704) | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |
| ಇ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : ಏಳು ಮತ್ತು ಎಂಟನೇ ಪಟ್ಟಿ |

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ. **ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಮಂಡಿಸುವುದು**

01. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2024
02. ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
03. ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
04. ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
05. ಸಿಗರೇಟುಗಳ ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹಿರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) (ಕರ್ನಾಟಕ ತಿದ್ದುಪಡಿ) ವಿಧೇಯಕ, 2024
06. ಅಂತರ್-ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024

ಆ. **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**
5ನೇ ರಾಜ್ಯ ಹಣಕಾಸು ಆಯೋಗವು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಮತ್ತು ಇತರೆ ಅಧಿಕಾರದ ಬಗ್ಗೆ ನೀಡಿರುವ ಪ್ರಥಮ ವರದಿ.

ಇ. ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ, 2024
**ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

.3..

02. ಗದಗ–ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಹೀಮ್ ಖಾನ್ (ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಗದಗ–ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರುಗಳ ವಿಧೇಯಕ, 2024
**ಶ್ರೀ ಸತೀಶ ಜಾರಕಿಹೊಳಿ (ಮಾನ್ಯ ಲೋಕೋಪಯೋಗಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರುಗಳ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023
**ಶ್ರೀ ಶಿವಾನಂದ ಎಸ್ ಪಾಟೀಲ್ (ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2024
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

06. ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

07. ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

08. ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

09. ಸಿಗರೇಟುಗಳ ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹಿರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) (ಕರ್ನಾಟಕ ತಿದ್ದುಪಡಿ) ವಿಧೇಯಕ, 2024
**ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಸಿಗರೇಟುಗಳ ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹಿರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) (ಕರ್ನಾಟಕ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

10. ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024
**ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ವಿತ್ತೀಯ ಕಾರ್ಯಕಲಾಪ

2024–25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕ್ರೀಡಾ ಪ್ರಾಧಿಕಾರದಲ್ಲಿ ಸಂಚಿತ ವೇತನದ ಆಧಾರದ ಮೇಲೆ 15 ರಿಂದ 30 ವರ್ಷಗಳವರೆಗೆ ಕಾರ್ಯನಿರ್ವಹಿಸುತ್ತಿರುವ ಸುಮಾರು 85 ಕ್ರೀಡಾ ತರಬೇತುದಾರರನ್ನು ಖಾಯಂಗೊಳಿಸುವ/ಕ್ರೀಡಾ ಇಲಾಖೆಯಲ್ಲಿ ವಿಲೀನಗೊಳಿಸುವ ಕುರಿತು ಮಾನ್ಯ ಯುವಜನ ಸೇವೆಗಳು, ಕ್ರೀಡೆಗಳು ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಬಿ.ಎಂ. ಫಾರೂಖ್** ಅವರು ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಎರಡನೇ ಭಾಷೆಯನ್ನಾಗಿ ಘೋಷಿಸಿ ಭಾರತ ಸಂವಿಧಾನದ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

.6..

೦೫. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ರಘುನಾಥ್ ರಾವ್ ಮಲ್ಕಾಪೂರೆ, ಎಂ.ಎಲ್. ಅನಿಲ್ ಕುಮಾರ್, ದಿನೇಶ್ ಗೂಳಿಗೌಡ, ಸುನೀಲ್ ವಲ್ಯಾಪುರ್, ಮರಿತಿಬ್ಬೇಗೌಡ ಹಾಗೂ ಇತರರು** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸುಂಕದಕಟ್ಟೆ ಗ್ರಾಮದ ಸರ್ವೆ ನಂ.37 ಮತ್ತು ನೆಟ್ಟಿಗೆರೆ ಗ್ರಾಮದ ಸರ್ವೆ ನಂ.42ಕ್ಕೆ ಸಂಬಂಧಿಸಿದಂತೆ ಪೋಡಿ ದುರಸ್ಥಿ ಬಗ್ಗೆ ಸ್ಥಳೀಯ ಅರಣ್ಯ ವ್ಯವಸ್ಥಾಪನಾ ಅಧಿಕಾರಿಗಳು ವಿಚಾರಣೆ ನಡೆಸಿ, ಆದೇಶ ಹೊರಡಿಸಲಾಗಿದ್ದರೂ ಅಂದಿನ ಎ.ಸಿ.ಎಫ್. ಅವರು ಸುಳ್ಳು ದಾಖಲಾತಿಗಳನ್ನು ಸೃಷ್ಠಿಸಿ ವಿನಾಕಾರಣ ಕಿರುಕುಳ ನೀಡುತ್ತಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦೬. **ಶ್ರೀಯುತರುಗಳಾದ ತಿಪ್ಪಣ್ಣಪ್ಪ ಕಮಕನೂರ, ಯು.ಬಿ. ವೆಂಕಟೇಶ್, ಮಂಜುನಾಥ್ ಭಂಡಾರಿ, ಡಾ: ಡಿ. ತಿಮ್ಮಯ್ಯ, ಎಂ. ನಾಗರಾಜು ಹಾಗೂ ಉಮಾಶ್ರೀ** ಅವರುಗಳು ಹೋರಾಟಗಾರರು ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಅಪಾರ ಕೊಡುಗೆ ನೀಡಿದಂತಹ ಕಲುಬುರಗಿಯ ದಿವಂಗತ ಡಾ: ಚನ್ನಣ್ಣ ವಾಲೀಕಾರ ಹಾಗೂ ರಾಯಚೂರಿನ ದಿವಂಗತ ಶಾಂತರಸರ ಹೆಸರುಗಳಲ್ಲಿ ಪ್ರತಿಷ್ಠಾನ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್, ಡಿ.ಎಸ್. ಅರುಣ್ ಹಾಗೂ ಹೆಚ್.ಎಸ್. ಗೋಪಿನಾಥ್** ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಮೂಲಗಳಿಂದ ಸಂಗ್ರಹವಾಗುವ ತೆರಿಗೆ ಹಾಗೂ ಆದಾಯ ಸೇರಿದಂತೆ ಬೆಂಗಳೂರಿನಲ್ಲಿ ಸಂಗ್ರಹವಾಗುವ ಜಿ.ಎಸ್.ಟಿ. ತೆರಿಗೆಯಲ್ಲಿನ ಖರ್ಚು/ವೆಚ್ಚಗಳ ಸಮಗ್ರ ಚಿತ್ರಣದ ಬಗ್ಗೆ ಶ್ವೇತಪತ್ರ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಮಧು ಜಿ. ಮಾದೇಗೌಡ** ಅವರುಗಳು ಸರ್ಕಾರಿ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6 ಮತ್ತು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಬಾಕಿಯನ್ನು ಪಾವತಿಸದಿರುವುದು ಹಾಗೂ ಪಾಲಿಟೆಕ್ನಿಕ್‌ಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿಯಾಗದಿರುವ ಕಾರಣ ಪ್ರಾಂಶುಪಾಲರ ಹುದ್ದೆಗಳು ಖಾಲಿಯಿರುವುದರಿಂದ ಉಂಟಾಗಿರುವ ಗಂಭೀರ ಪರಿಸ್ಥಿತಿಯ ಕುರಿತು ಪ್ರಸ್ತಾಪಿಸುವುದು.

೦3. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಟರ್ಫ್ ಕ್ಲಬ್‌ನವರು ನೂರಾರು ಕೋಟಿ ರೂಪಾಯಿಗಳ ತೆರಿಗೆಯನ್ನು ಪಾವತಿಸದೆ ಸರ್ಕಾರಕ್ಕೆ ವಂಚಿಸಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**